Bruhat Bengaluru
Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
# ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
# ವಾರ್ಡ್ ಸಮಿತಿ ಸಭೆ ದಿನಾಂಕ: 20/11/2021ರ
# ಸಭಾ ನಡವಳಿ

ಸಕಾಅ/ಕೆಂಉವಿ/ವಾರ್ಡ್ ಕಮಿಟಿ-ಸಭೆ -11/2021-22 ದಿನಾಂಕ: 20.11.2021

ದಿನಾಂಕ: 20.11.2021 ರಂದು ಬೆಳಿಗ್ಗೆ 10.30 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ಹಾಜರಿದ್ದವರು:

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಕಾರ್ಯಪಾಲಕ ಅಭಿಯಂತರರು, ಉಪ ನಿರ್ದೇಶಕರ ಕಛೇರಿ ಕಟ್ಟಡ ಪರವಾನಗೆ ಕೋಶ-ಉತ್ತರ |
| 2 | ಶ್ರೀ ದಯಾನಂದ.ಎನ್ | ಸಹಾಯಕ ಅಭಿಯಂತರರು, ವಾರ್ಡ್-198, ಹೆಮ್ಮಿಗೆಪುರ |
| 3 | ಶ್ರೀಮತಿ ಮೋನಿಕ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.198, ಹೆಮ್ಮಿಗೆಪುರ |
| 4 | ಶ್ರೀ ಸಿ.ವಿ. ಸೂರ್ಯನಾರಾಯಣ | ಜಲ ಪರಿವೀಕ್ಷಕರು ಬೆಂಗಳೂರು ಜಲ ಮಂಡಳಿ |
| 5 | ಶ್ರೀ ಕೃಷ್ಣನಾಯಕ್ | ಕೆಲಸಪರಿವೀಕ್ಷಕರು ವಾರ್ಡ್ ನಂ.198, ಬಿಬಿಎಂಪಿ |

ಶ್ರೀ ದಯಾನಂದ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಭಾಗವಹಿಸಿದ್ದ ಎಲ್ಲರನ್ನೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.



Scanned with CamScanner

❖ **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-** ಅಧ್ಯಕ್ಷರು, ಕೋವಿಡ್-19ರ ಸಾಂಕ್ರಾಮಿಕ ರೋಗದ ಬಗ್ಗೆ ಹಾಗೂ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು ಹಾಗೂ ಕೋವಿಡ್ ಪರಿವೀಕ್ಷಣೆಯಿಂದ ಮೊದಲುಗೊಂಡು ಆಸ್ಪತ್ರೆಗೆ ದಾಖಲಾಗುವವರೆಗೆ ಮತ್ತು ಕೋವಿಡ್-19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್-19ರ ಪರೀಕ್ಷೆಯನ್ನು ಹೆಚ್ಚು ಮಾಡುವ ಬಗ್ಗೆ ಸಹಕರಿಸುವಂತೆ ಸಭೆಯಲ್ಲಿದ್ದ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರುಗಳು ಮತ್ತು ಅಧಿಕಾರಿ ವರ್ಗದವರಿಗೆ ವಿನಂತಿಸಿ, ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳು ಸದರಿಯವರನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸೂಚಿಸಿದರು ಮತ್ತು ಮಾಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸದೇ ಇರುವವರಿಗೆ ದಂಡವನ್ನು ವಿಧಿಸಲು ಸೂಚಿಸಲಾಯಿತು ಹಾಗೂ ಕೋವಿಡಡ್-19 ವ್ಯಾಕ್ಸಿನ್ ಲಸಿಕೆಗಳನ್ನು ನೀಡುತ್ತಿರುವ ಸ್ಥಳ ವಿವರಗಳನ್ನು ಸಭೆಗೆ ತಿಳಿಸಲಾಯಿತು. ಇದರ ಸದುಪಯೋಗ ಪಡೆಯಲು ಭಾಗವಹಿಸಿದ್ದ ಎಲ್ಲರಿಗೂ ಕೋರಲಾಯಿತು.

❖ **ಪೊಲೀಸ್ ಇಲಾಖೆ:-** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ಮಹಿಳೆಯರ ಸರಗಳ್ಳತನ ನಡೆದಿದ್ದು, ಅದರಂತೆ ಪೊಲೀಸ್ ಕಾವಲನ್ನು ಹಾಕಲು ಸಭೆಗೆ ಕೋರಲಾಯಿತು ಸಂಬಂಧ ನೋಡಲ್ ಅಧಿಕಾರಿಯವರು ಕೆಂಗೇರಿ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್‌ರವರಿಗೆ ದೂರವಾಣಿ ಮುಖಾಂತರ ಮಾತನಾಡಿ ಕೃತ್ಯ ನಡೆದ ಬಗ್ಗೆ ವಿವರಿಸಿದ್ದು, ಸದರಿ ಪ್ರದೇಶದಲ್ಲಿ ಪೊಲೀಸ್ ಬಂದೋಬಸ್ತ್ ಹಮ್ಮಿಕೊಳ್ಳಲಾಗಿರುವ ಬಗ್ಗೆ ವಿಷಯ ತಿಳಿಸಿದರು.

❖ **ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ** :- 1) ವಾರ್ಡ್ ನಂ.198ರಲ್ಲಿ ನಡೆಯುವ ವಾರ್ಡ್ ಕಮಿಟಿ ಸಭೆಯ ನಡುವಳಿಗಳು ಪಾಲಿಕೆಯ ವೆಬ್‌ಸೈಟ್‌ನಲ್ಲಿ ಪ್ರಚಾರವಾಗದಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ವಾರ್ಡ್ ಕಮಿಟಿ ಸಭೆಯ ಕಾರ್ಯದರ್ಶಿಯವರು ಮಾತನಾಡಿ ಪ್ರತಿ ವಾರ್ಡ್ ಕಮಿಟಿ ಸಭೆಯ ನಡುವಳಿಗಳನ್ನು ತಯಾರಿಸಿ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು bbmp198wardcommittee@gmail.com ರವರ ಇ-ಮೇಲ್ ಖಾತೆ ಕಳುಹಿಸಲಾಗುತ್ತಿರುತ್ತದೆ ಎಂದು ಹಾಗೂ ವೆಬ್‌ಸೈಟ್‌ನಲ್ಲಿ ನಡವಳಿಗಳನ್ನು ಪ್ರಚುರಪಡಿಸದಿರುವ ಬಗ್ಗೆ ಗಮನಸೆಳೆದು ಕೌನ್ಸಿಲ್ ಕಾರ್ಯದರ್ಶಿವರಿಗೆ ಪತ್ರ ಬರೆಯಲಾಗಿರುವ ಅಂಶವನ್ನು ಸಹ ಸಭೆಯ ಗಮನಕ್ಕೆ ತಂದರು.

Dayanandan

(ದಯಾನಂದ.ಎನ್)
ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್-198, ಹೆಮ್ಮಿಗೆಪುರ

ಸಹಿ/-
(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ
ವಾರ್ಡ್-198, ಹೆಮ್ಮಿಗೆಪುರ



Scanned with CamScanner

ಪ್ರತಿಯನ್ನು:-

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.
2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಕಳುಹಿಸಿದೆ.
8) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
10) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
12) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
13) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
14) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
15) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
16) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

Scanned with CamScanner